**All India Radio: Bangalore**
**National Bulletin In Kannada**
**17.08.2026 1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.08.2026 1.10 pm**

**<>><><*><><<>**

ಮುಖ್ಯಾಂಶಗಳು

**೧. ಸಾರ್ವಜನಿಕ ವಲಯ ಬ್ಯಾಂಕ್‌ಗಳಿಗಾಗಿ ಶೀಘ್ರದಲ್ಲೇ ಉನ್ನತಮಟ್ಟದ ಸಮಿತಿ ರಚನೆ ; ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್**

**೨. ೧೫ನೇ ಆವೃತ್ತಿಯ ಭಾರತ-ಥೈಲ್ಯಾಂಡ್ ಜಂಟಿ ಮಿಲಿಟರಿ ಸಮರಾಭ್ಯಾಸ ಮೈತ್ರಿ ; ಥೈಲ್ಯಾಂಡ್‌ನತ್ತ ಪ್ರಯಾಣ ಬೆಳೆಸಿದ ಭಾರತೀಯ ಸೇನಾ ತುಕಡಿ**

**೩. ಬಿಹಾರದ ಕಾಲ್ತುಳಿತ ಮತ್ತು ಪಶ್ಚಿಮಬಂಗಾಳದ ಅಗ್ನಿ ದುರ್ಘಟನೆಗಳಲ್ಲಿ ಒಟ್ಟು ೧೨ ಮಂದಿ ಸಾವು, ಅನೇಕರಿಗೆ ಗಾಯ**

**೪. ಭಾರತ-ಶ್ರೀಲಂಕಾ ಟೆಸ್ಟ್ ಕ್ರಿಕೆಟ್ ; ಮೂರನೇ ದಿನದಾಟದಲ್ಲಿಂದು ಭೋಜನ ವಿರಾಮದ ವೇಳೆಗೆ ಶ್ರೀಲಂಕಾದ ೫ ವಿಕೆಟ್ ಕಬಳಿಸಿದ ಭಾರತ**

**<>><><*><><<>**

ಸಾರ್ವಜನಿಕ ವಲಯ ಬ್ಯಾಂಕ್‌ಗಳಿಗಾಗಿ ಕೇಂದ್ರ ಸರ್ಕಾರ ಶೀಘ್ರದಲ್ಲೆ ಉನ್ನತ ಮಟ್ಟದ ಸಮೀತಿಯನ್ನು ರಚಿಸಲಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಎರಡು ದಿನಗಳ ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಬ್ಯಾಂಕಿಂಗ್ ಕ್ಷೇತ್ರದ ವಿವಿಧ ವಿಷಯಗಳು ಮತ್ತು ಶಿಫಾರಸ್ಸುಗಳನ್ನು ಪರಿಶೀಲಿಸಿ ಭವಿಷ್ಯದ ಬ್ಯಾಂಕ್ ಸುಧಾರಣೆಗಳ ಹಾದಿಯನ್ನು ಈ ಸಮಿತಿ ನಿರ್ಧರಿಸಲಿದೆ ಎಂದು ಹೇಳಿದರು. ಇದರ ಜೊತೆಗೆ ವಿಕಸಿತ ಭಾರತ ನಿರ್ಮಾಣದಲ್ಲಿ ಬ್ಯಾಂಕರ್‌ಗಳು ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದು ತಿಳಿಸಿದರು. ಈ ಎರಡೂ ದಿನಗಳ ಸಮಾವೇಶದಲ್ಲಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಮತ್ತು ಸಾರ್ವಜನಿಕ ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದು, ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರದ ಪ್ರಮುಖ ಆದ್ಯತೆಗಳು, ಉದಯೋನ್ಮುಖ ಅಕಾಶಗಳು ಹಾಗೂ ಬದಲಾಗುತ್ತಿರುವ ಸ್ವರೂಪದ ಕುರಿತು ವಿಸ್ತೃತವಾಗಿ ಚರ್ಚಿಸಲಿದ್ದಾರೆ.

<>><><*><><<>

ಭಾರತ ಮತ್ತು ಥೈಲ್ಯಾಂಡ್ ನಡುವಿನ ಜಂಟಿ ಮಿಲಿಟರಿ ಸಮರಾಭ್ಯಾಸ ಮೈತ್ರಿಯ ೧೪ನೇ ಆವೃತ್ತಿಯಲ್ಲಿ ಭಾಗವಹಿಸಲು ಭಾರತೀಯ ಸೇನೆಯ ತುಕಡಿ ಇಂದು ಥೈಲ್ಯಾಂಡ್‌ಗೆ ತೆರಳಿದೆ. ಈ ಸಮರಾಭ್ಯಾಸ ನಾಳೆಯಿಂದ ಆರಂಭವಾಗಲಿದ್ದು, ಇದೇ ೩೧ರವರೆಗೆ ನಡೆಯಲಿದೆ. ಎರಡೂ ರಾಷ್ಟ್ರಗಳ ನಡುವಿನ ಮಿಲಿಟರಿ ಸಹಕಾರ ಬಲಪಡಿಸುವುದು ಮೈತ್ರಿ ಸಮರಾಭ್ಯಾಸದ ಪ್ರಮುಖ ಉದ್ದೇಶವಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ದಟ್ಟ ಅರಣ್ಯ ಹಾಗೂ ಅರೆ ನಗರ ಪ್ರದೇಶಗಳಲ್ಲಿ ಭಯೋತ್ಪಾದನಾ ವಿರೋಧಿ ಮತ್ತು ಬಂಡಾಯ ನಿಗ್ರಹ ಕಾರ್ಯಾಚರಣೆಗಳನ್ನು ಕೈಗೊಳ್ಳುವ ಜಂಟಿ ಸಾಮರ್ಥ್ಯವನ್ನು ಹೆಚ್ಚಿಸಲು ಈ ತರಬೇತಿ ನೆರವಾಗಲಿದೆ. ಇದರಲ್ಲಿ ಭಾರತೀಯ ಸೇನೆ ಮತ್ತು ಥೈಲ್ಯಾಂಡ್ ಸೇನೆಯಿಂದ ತಲಾ ೮೪ ಯೋಧರು ಭಾಗವಹಿಸುತ್ತಿದ್ದಾರೆ.

ಭಾರತೀಯ ಸೇನೆಯನ್ನು ಪ್ರಮುಖವಾಗಿ ೯ ಗೋರ್ಖಾ ರೈಫಲ್ಸ್ ಪಡೆ ಪ್ರತಿನಿಧಿಸುತ್ತಿದ್ದು, ಥೈಲ್ಯಾಂಡ್ ಪಡೆಗಳನ್ನು ೩ನೇ ಬೆಟಾಲಿಯನ್, ೨೪ನೇ ಇನ್ಫೆಂಟ್ರಿ ಬ್ರಿಗೇಡ್ ಪ್ರತಿನಿಧಿಸುತ್ತಿದೆ. ಕಳೆದ ಆವೃತ್ತಿಯ ಸಮರಾಭ್ಯಾಸ ಮೇಘಾಲಯದಲ್ಲಿ ನಡೆದಿತ್ತು.

<>><><*><><<>

ಬಿಹಾರ ಮತ್ತು ಪಶ್ಚಿಮ ಬಂಗಾಳದಲ್ಲಿ ಇಂದು ಸಂಭವಿಸಿದ ಪ್ರತ್ಯೇಕ ದುರ್ಘಟನೆಗಳಲ್ಲಿ ೧೨ ಮಂದಿ ಮೃತಪಟ್ಟಿದ್ದು, ಅನೇಕರು ಗಾಯಗೊಂಡಿದ್ದಾರೆ. ಬೀಹಾರದ ಲಖೀಸರಾಯ್ ಜಿಲ್ಲೆಯ ಪ್ರಸಿದ್ಧ ಅಶೋಕ್ ಧಾಮ್ ದೇವಾಲಯದ ಬಳಿ ಇಂದು ಬೆಳಿಗ್ಗೆ ಸಂಭವಿಸಿದ ಭೀಕರ ಕಾಲ್ತುಳಿತದಲ್ಲಿ ಏಳು ಮಹಿಳಾ ಭಕ್ತರು ಮೃತಪಟ್ಟಿದ್ದು, ಹತ್ತಕ್ಕೂ ಹೆಚ್ಚು ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ. ಪವಿತ್ರ ಶ್ರಾವಣ ಸೋಮವಾರದ ಅಂಗವಾಗಿ ಶಿವಲಿಂಗಕ್ಕೆ ಜಲಾಭಿಷೇಕ ನೆರವೇರಿಸಲು ಅಪಾರ ಸಂಖ್ಯೆಯ ಭಕ್ತಾದಿಗಳು ಆಗಮಿಸಿದ್ದಾಗ ಈ ದುರಂತ ಸಂಭವಿಸಿದೆ. ಅಶೋಕ್ ಧಾಮ್ ರೈಲು ನಿಲ್ದಾಣದಿಂದ ದೇವಾಲಯಕ್ಕೆ ತೆರಳುವ ಮಾರ್ಗದಲ್ಲಿ ಕಾಲ್ತುಳಿತ ಸಂಭವಿಸಿದೆ. ವಿದ್ಯುತ್ ಕಂಬವೊಂದು ನೆಲಕ್ಕೆ ಬಿದ್ದು ವಿದ್ಯುತ್ ಪ್ರವಹಿಸುತ್ತಿದೆ ಎಂಬ ವದಂತಿ ಹರಡಿದ್ದೇ ಕಾಲ್ತುಳಿತಕ್ಕೆ ಮುಖ್ಯ ಕಾರಣ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ. ಗಂಭೀರವಾಗಿ ಗಾಯಗೊಂಡವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಪಾಟ್ನಾ ಮೆಡಿಕಲ್ ಕಾಲೇಜು ಆಸ್ಪತ್ರೆಗೆ ರವಾನಿಸಲಾಗಿದ್ದು, ಉಳಿದ ಗಾಯಾಳುಗಳಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆ ಕುರಿತಂತೆ ಪ್ರಧಾನಿ ನರೇಂದ್ರ ಮೋದಿ ತೀವ್ರ ದುಃಖ ವ್ಯಕ್ತಪಡಿಸಿದ್ದು, ಘಟನೆಯಲ್ಲಿ ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ. ದುರಂತದಿಂದ ಸಂಕಷ್ಟಕ್ಕೀಡಾದ ಸಂತ್ರಸ್ತರಿಗೆ ಮತ್ತು ಅವರ ಕುಟುಂಬಗಳಿಗೆ ಸ್ಥಳೀಯ ಜಿಲ್ಲಾಡಳಿತ ಸಾಧ್ಯವಿರುವ ಎಲ್ಲಾ ನೆರವು ನೀಡುತ್ತಿದೆ ಎಂದು ಭರವಸೆ

ನೀಡಿದ್ದಾರೆ. ಘಟನೆಗೆ ತೀವ್ರ ಕಂಬನಿ ಮಿಡಿದಿರುವ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ, ಗಾಯಾಳುಗಳಿಗೆ ತಕ್ಷಣವೇ ಸೂಕ್ತ ಮತ್ತು ತುರ್ತು ವೈದ್ಯಕೀಯ ನೆರವು ಒದಗಿಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದ್ದಾರೆ ಹಾಗೂ ಮೃತರ ಕುಟುಂಬಸ್ಥರಿಗೆ ತಲಾ ೪ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

**<>><><*><><<>**

ಪಶ್ಚಿಮ ಬಂಗಾಳದ ಬೀರ್‌ಭೂಮ್ ಜಿಲ್ಲೆಯ ತಾರಾಪೀಠ ಪೊಲೀಸ್ ಠಾಣೆ ವ್ಯಾಪ್ತಿಯ ಹೋಟೆಲ್ ಒಂದರಲ್ಲಿ ಇಂದು ಬೆಳಗ್ಗೆ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಕನಿಷ್ಠ ಐವರು ಮೃತಪಟ್ಟಿದ್ದು, ಹಲವರು ಅಸ್ವಸ್ಥಗೊಂಡಿದ್ದಾರೆ. ಕೆಳಗಿನ ಮಹಡಿಯಲ್ಲಿ ಮೊದಲಿಗೆ ಕಾಣಿಸಿಕೊಂಡ ಬೆಂಕಿ ಕೆಲವೇ ಕ್ಷಣಗಳಲ್ಲಿ ೪ ಮಹಡಿಗಳ ಇಡೀ ಕಟ್ಟಡಕ್ಕೆ ವ್ಯಾಪಿಸಿದೆ. ಅಗ್ನಿ ಅನಾಹುತ ಸಂಭಿಸಿದಾಗ ಹೆಚ್ಚಿನ ಪ್ರವಾಸಿಗರು ನಿದ್ರೆಯಲ್ಲಿದ್ದರು. ಶ್ರಾವಣಮಾಸದ ಸೋಮವಾರ ಅಂಗವಾಗಿ ಧಾರ್ಮಿಕ ಕ್ಷೇತ್ರ ತಾರಾಪೀಠಕ್ಕೆ ಆಗಮಿಸಿದ್ದ ಯಾತ್ರಾರ್ಥಿಗಳಿಂದ ಈ ಹೋಟೆಲ್ ಭರ್ತಿಯಾಗಿತ್ತು. ಶಾರ್ಟ್ ಸರ್ಕ್ಯೂಟ್ ನಿಂದಾಗಿ ಈ ಅಗ್ನಿಅವಘಡ ಸಂಭವಿಸಿರುವುದಾಗಿ ಹೋಟೆಲ್ ಮಾಲೀಕರು ತಿಳಿಸಿದ್ದಾರೆ.

**<>><><*><><<>**

ಭಾರತ ತನ್ನ ಬ್ರಿಕ್ಸ್ ಅಧ್ಯಕ್ಷತೆಯಡಿಯಲ್ಲಿ ಜನಕೇಂದ್ರಿತ ವಿಧಾನಕ್ಕೆ ಹೆಚ್ಚಿನ ಒತ್ತು ನೀಡಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಆರ್ಥಿಕ ಸಂಬಂಧಗಳ ಕಾರ್ಯದರ್ಶಿ ಸುಧಾಕರ್ ದಲೇಲಾ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಆಯೋಜಿಸಲಾಗಿದ್ದ ಬ್ರಿಕ್ಸ್ ನಾಗರಿಕ ವೇದಿಕೆ ೨೦೨೬ ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಅಧ್ಯಕ್ಷತೆಯಲ್ಲಿ ದೇಶದ ವಿವಿಧ ನಗರಗಳಲ್ಲಿ ಇದುವರೆಗೆ ೩೫೦ಕ್ಕೂ ಹೆಚ್ಚು ಸಭೆಗಳನ್ನು ಯಶಸ್ವಿಯಾಗಿ ನಡೆಸಲಾಗಿದ್ದು, ವಿವಿಧ ಕ್ಷೇತ್ರಗಳಲ್ಲಿ ಮಹತ್ವದ ಫಲಿತಾಂಶಗಳನ್ನು ಸಾಧಿಸಲಾಗಿದೆ ಎಂದು ತಿಳಿಸಿದರು.

ಈ ಉಪಕ್ರಮಗಳು ಬ್ರಿಕ್ಸ್‌ನ ಮೂರು ಪ್ರಮುಖ ಆಧಾರಸ್ತಂಭಗಳಾದ ರಾಜಕೀಯ ಮತ್ತು ಭದ್ರತಾ ಸಹಕಾರ, ಹಣಕಾಸು ಪಾಲುದಾರಿಕೆ ಮತ್ತು ಜನರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಿದೆ. ಉದಯೋನ್ಮುಖ ಆರ್ಥಿಕತೆಗಳ ಜಾಗತಿಕ ಧ್ವನಿಯಾಗಿ ಬ್ರಿಕ್ಸ್ ಹೊರಹೊಮ್ಮಿದ್ದು, ಈ ವರ್ಷ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಗೆ ಈ ನಾಗರಿಕ ವೇದಿಕೆಯಿಂದ ದೊರೆಯುವ ಸಲಹೆಗಳು ಅತ್ಯಂತ ಮೌಲ್ಯಯುತವಾಗಿರಲಿವೆ ಎಂದರು.

**<>><><*><><<>**

ಪರೀಕ್ಷ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಅಭ್ಯರ್ಥಿಗಳ ಹಿತರಕ್ಷಣೆ ಕಾಯ್ದುಕೊಳ್ಳುವುದು ಸಂಸ್ಥೆಯ ಮುಖ್ಯ ಆದ್ಯತೆಯಾಗಿದೆ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ ತಿಳಿಸಿದೆ. ಯುಜಿಸಿ ನೆಟ್ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿ ಕಂಡುಬಂದ ದೋಷಗಳ ಹಿನ್ನೆಲೆಯಲ್ಲಿ ಆಂಗ್ಲ, ಸಮಾಜಶಾಸ್ತ್ರ ಮತ್ತು ವಾಣಿಜ್ಯ ವಿಷಯಗಳಿಗೆ ಮರು ಪರೀಕ್ಷೆ ನಡೆಸಲು ನಿರ್ಧರಿಸಿರುವ ಕುರಿತು ಎನ್‌ಟಿಎ ಸ್ಪಷ್ಟನೆ ನೀಡಿದೆ. ಸಂಸ್ಥೆಯು ಇತ್ತೀಚೆಗೆ ೧೮೪ ವಿಷಯಗಳಲ್ಲಿ ಒಟ್ಟು ೨೪ ಸಾವರದ ೭೦೦ಕ್ಕ ಹೆಚ್ಚು ಪ್ರಶ್ನೆಗಳನ್ನು ಒಳಗೊಂಡ ಬೃಹತ್ ಪರೀಕ್ಷಾ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಇದರಲ್ಲಿ ೧೮೧ ವಿಷಯಗಳ ಪ್ರಶ್ನೆಪತ್ರಿಕೆಗಳು ಸಂಪೂರ್ಣ ದೋಷರಹಿತವಾಗಿದ್ದು, ಅವುಗಳ ಉತ್ತರ ಕೀಲಿಗಳನ್ನು ಪ್ರಕಟಿಸಲಾಗಿದೆ. ಪರಿಶೀಲನೆ ವೇಳೆ ಮೂರು ವಿಷಯಗಳ ಪ್ರಶ್ನೆ ಪತ್ರಿಕೆಗಳಲ್ಲಿ ಲೋಪದೋಷಗಳು ಕಂಡು ಬಂದಿದ್ದರಿಂದ ವಿಷಯ ತಜ್ಞರ ಸಲಹೆಯಂತೆ ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗಬಾರದು ಎಂಬ ಕಾರಣಕ್ಕೆ ಮರು ಪರೀಕ್ಷೆ ನಡೆಸಲಾಗುತ್ತಿದೆ.

**<>><><*><><<>**

ನಾಗರಿಕರಲ್ಲಿ ಚುನಾವಣಾ ಜಾಗೃತಿ ಹಾಗೂ ಡಿಜಿಟಲ್ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಇಂದು ಪಟ್ನಾದಲ್ಲಿ ಚುನಾವಣಾ ಸಾಕ್ಷರತಾ ಕ್ಲಬ್‌ಗೆ ಚಾಲನೆ ನೀಡಲಿದ್ದಾರೆ. ಯುವಜನತೆಯನ್ನು ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ತೊಡಗಿಸಲು ೨೦೧೮ ರಲ್ಲಿ ಆರಂಭಿಸಲಾದ ಈ ಯೋಜನೆಯ ಹೊಸ ಆವೃತ್ತಿಯಡಿ, ಮುಂದಿನ ಆರು ತಿಂಗಳಲ್ಲಿ ದೇಶಾದ್ಯಂತ ೧೫ ಲಕ್ಷ ಶಾಲೆಗಳು, ೭೦ ಸಾವಿರ ಕಾಲೇಜುಗಳು ಹಾಗೂ ೧ ಸಾವಿರದ ೪೨೦ ವಿಶ್ವವಿದ್ಯಾಲಯಗಳಲ್ಲಿ ಕ್ಲಬ್‌ಗಳನ್ನು ಸ್ಥಾಪಿಸಿ 'ಇಸಿಐ-ನೆಟ್' ನೊಂದಿಗೆ ಸಂಯೋಜಿಸುವ ಗುರಿ ಹೊಂದಲಾಗಿದೆ. ಇದರ ಜೊತೆಗೆ, ರಾಜಗೀರ್‌ನ ನಳಂದ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಮತ್ತೊಂದು ಕಾರ್ಯಕ್ರಮದಲ್ಲಿ ಮುಖ್ಯ ಚುನಾವಣಾ ಆಯುಕ್ತರು ಸುಮಾರು ೫೦೦ ಬೂತ್ ಮಟ್ಟದ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

**<>><><*><><<>**

ಅಸ್ಸಾಂನ ಪ್ರವಾಹದಿಂದ ತೀವ್ರವಾಗಿ ಸಂಕಷ್ಟಕ್ಕೊಳಗಾದ ಶಿವಸಾಗರ, ಗೋಲಾಘಾಟ್, ಜೋರ್ಹಾಟ್ ಹಾಗೂ ಚರಾಯ್‌ದೇವ್ ಜಿಲ್ಲೆಗಳ ಪ್ರವಾಹಪೀಡಿತ ಕುಟುಂಬಗಳಿಗೆ ಮುಖ್ಯಮಂತ್ರಿ ಡಾ.ಹಿಮಂತ್ ಬಿಸ್ವಾ ಸರ್ಮ, ಇಂದು ಮಧ್ಯಂತರ ಆರ್ಥಿಕ ನೆರವು ಬಿಡುಗಡೆ ಮಾಡಿದ್ದಾರೆ. ಗುವಾಹಟಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಜಿಲ್ಲೆಗಳಲ್ಲಿ ಪ್ರವಾಹದ ನೀರು ಇಳಿಮುಖವಾಗಿದ್ದು, ಪರಿಹಾರ ಮತ್ತು ಪುನರ್‌ವಸತಿ ಕಾರ್ಯಗಳನ್ನು ತೀವ್ರಗೊಳಿಸಲಾಗಿದೆ ಎಂದು

ತಿಳಿಸಿದ್ದಾರೆ. ಸಂತ್ರಸ್ತಗೊಂಡ ಸುಮಾರು ಒಂದು ಲಕ್ಷ ಕುಟುಂಬಗಳಲ್ಲಿ ಪ್ರತಿಯೊಂದು ಕುಟುಂಬಕ್ಕೆ ತಲಾ ೧೫ ಸಾವಿರ ರೂಪಾಯಿ ಆರ್ಥಿಕ ನೆರವು ನೀಡಲಾಗಿದೆ ಎಂದು ಹೇಳಿದ್ದಾರೆ.

**<>><><*><><<>**

ಶ್ರೀಲಂಕಾದ ಗಾಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ-ಶ್ರೀಲಂಕಾ ನಡುವಿನ ಮೊದಲ ಟೆಸ್ಟ್ ಪಂದ್ಯದ ಮೂರನೇ ದಿನದಾಟದಲ್ಲಿಂದು ಭಾರತ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೪೬೨ ರನ್ ಗಳಿಸಿ ತನ್ನೆಲ್ಲ ವಿಕೆಟ್ ಕಳೆದುಕೊಂಡಿತು. ದೇವದತ್ ಪಡಿಕಲ್ ಅವರ ೧೬೭ ರನ್ ಹಾಗೂ ಕೆ.ಎಲ್.ರಾಹುಲ್ ಅವರ ೮೨, ಮತ್ತು ಧ್ರುವ್ ಜುರೇಲ್ ಅವರ ೫೧ ರನ್‌ಗಳ ಉಪಯುಕ್ತ ನೆರವಿನಿಂದ ಭಾರತ ಬೃಹತ್ ಮೊತ್ತ ಕಲೆ ಹಾಕಿದೆ. ಎರಡನೇ ದಿನದ ಅಂತ್ಯಕ್ಕೆ ೯ ವಿಕೆಟ್ ಕಳೆದುಕೊಂಡಿದ್ದ ಭಾರತ ಇಂದು ಉಳಿದ ಒಂದು ವಿಕೆಟ್ ಕಳೆದುಕೊಂಡ ಬೆನ್ನಲ್ಲೇ ಶ್ರೀಲಂಕಾ ತನ್ನ ಮೊದಲ ಇನ್ನಿಂಗ್ಸ್ ಆರಂಭಿಸಿದ್ದು, ಭೋಜನ ವಿರಾಮದ ವೇಳೆಗೆ ೫ ವಿಕೆಟ್ ನಷ್ಟಕ್ಕೆ ೯೯ ರನ್‌ಗಳಿಸಿತ್ತು. ಬಳಿಕ ಆಟ ಪುನರಾರಂಭಗೊಂಡಿದ್ದು, ಇತ್ತೀಚಿನ ವರದಿ ಬಂದಾಗ ಶ್ರೀಲಂಕಾ ೫ ವಿಕೆಟ್ ನಷ್ಟಕ್ಕೆ ೧೨೧ ರನ್‌ಗಳಿಸಿ ಆಡುತ್ತಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**